ಆಯುಕ್ತರ ಕಛೇರಿ,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ನಂ.16/ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ, ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ,
ವಸಂತನಗರ, ಬೆಂಗಳೂರು-52.
ದೂ:080-22374836,ಇ-
ಮೇಲ್:bcdbng@nic.in
bcwd.scholarship@karnataka.gov.in

ಸಂ:ಹಿಂವಕಇ/ವಿವೇ/ಸಿಆರ್-20/2021-22 ದಿನಾಂಕ:30.09.2021.

ಗೆ,
ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ
ವರ್ಗಗಳ ಕಲ್ಯಾಣಾಧಿಕಾರಿಗಳಿಗೆ.

ಮಾನ್ಯರೆ,

ವಿಷಯ: 2021-22ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆಅಲೆಮಾರಿ ಪ್ರವರ್ಗ-1 ವಿದ್ಯಾರ್ಥಿಗಳಿಂದ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ, ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸುವ ಬಗ್ಗೆ.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2021-22ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ, ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸುವ ಕುರಿತು ಪ್ರಕಟಣೆಯನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದೆ. ಸದರಿ ಪ್ರಕಟಣೆಯನ್ನು ಜಿಲ್ಲಾಮಟ್ಟದ ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ 3 ದಿನಗಳ ಕಾಲ ಪ್ರಚುರ ಪಡಿಸುವಂತೆ ಹಾಗೂ ಎಲ್ಲಾ ಸರ್ಕಾರದ ಕಛೇರಿಗಳು ಮತ್ತು ಕಾಲೇಜುಗಳ ನಾಮಫಲಕಗಳಲ್ಲಿ ಪ್ರಕಟಿಸಲು ಕ್ರಮವಹಿಸುವಂತೆ ಸೂಚಿಸಲಾಗಿದೆ.

ನಿಮ್ಮ ವಿಶ್ವಾಸಿ

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.

ಕರ್ನಾಟಕಸರ್ಕಾರ

**ಆಯುಕ್ತರ ಕಛೇರಿ**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**

**ನಂ.16/ಡಿ, 3ನೇ ಮಹಡಿ, ದೇವರಾಜ ಅರಸು ಭವನ,**
**ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು-52**

**ಸಂ:ಹಿಂವಕನಿ/ವಿವೇ/ಸಿಆರ್- 20/2021-22** **ದಿನಾಂಕ: 30.09.2021**

## ಪ್ರಕಟಣೆ

ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, 2021-22 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ", "ಶುಲ್ಕ ವಿನಾಯಿತಿ", ಮತ್ತು "ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ", ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, 31.10.2021 ಕ್ಕೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ನಿಗದಿಪಡಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಲು ಸೂಚಿಸಿದೆ.

- **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ :** **31.10.2021**
- **ಆನ್‌ಲೈನ್ ಮೂಲಕ ಅರ್ಜಿಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ :** www.ssp.postmatric.karnataka.gov.in/2122
- **ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್ ಸೈಟ್ ವಿಳಾಸ** www.bcwd.karnataka.gov.in/
- **ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ :** 8050770005/ 8050770004
  **ಇಮೇಲ್:** bcwd.scholarship@karnataka.gov.in
- **ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ**
  **ಇಮೇಲ್:** postmatrichelp@karnataka.gov.in
  **ದೂರವಾಣಿ ಸಂಖ್ಯೆ:** 080-35254757

**ಆಯುಕ್ತರು**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಬೆಂಗಳೂರು**

**"ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನ", "ಶುಲ್ಕ ವಿನಾಯಿತಿ", ಮತ್ತು "ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ", ಸೌಲಭ್ಯ ಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಸೂಚನೆಗಳು.**

1. ಭಾರತ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಧಿಸೂಚಿಸಿರುವ, ಇತರೆ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿರಬೇಕು.
2. ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿ ಆಗಿರಬೇಕು.
3. ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ, ಸರ್ಕಾರಿ ಸ್ಥಳೀಯ ಸಂಸ್ಥೆ/ಅನುದಾನಿತ ಸಂಸ್ಥೆಗಳು/ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಸಂಸ್ಥೆಗಳಲ್ಲಿ - ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಾಗಿರಬೇಕು.
4. ಈ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಹರಾದವರು, ಆನ್ ಲೈನ್ (Online) ಮೂಲಕ ಅರ್ಜಿ ಸಲ್ಲಿಸಬೇಕು.
5. ಸಮಾಜ ಕಲ್ಯಾಣ ಇಲಾಖೆ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಸೇರುವ ವಿದ್ಯಾರ್ಥಿಗಳು ಸದರಿ ಸೌಲಭ್ಯಕ್ಕಾಗಿ ಆಯಾಯ ಸಂಬಂಧಪಟ್ಟ ಇಲಾಖೆಯನ್ನು ಸಂಪರ್ಕಿಸುವುದು.
6. "ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನ", "ಶುಲ್ಕ ವಿನಾಯಿತಿ" ಮತ್ತು ವಿದ್ಯಾಸಿರಿ-"ಊಟ & ವಸತಿ ಸಹಾಯ ಯೋಜನೆ" ಸೌಲಭ್ಯ ಪಡೆಯಲು ವಿದ್ಯಾರ್ಥಿಯ ತಂದೆ-ತಾಯಿ/ಪೋಷಕರ ಕುಟುಂಬದ ಒಟ್ಟು ವಾರ್ಷಿಕ ವರಮಾನ (Gross Annual Income) ಈ ಕೆಳಗೆ ನಿಗದಿಪಡಿಸಿದ ಮಿತಿಯೊಳಗೆ ಇರಬೇಕು. ಪ್ರವರ್ಗ -1 ರ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷಗಳು ಪ್ರವರ್ಗ-2ಎ, 3ಎ, 3ಬಿ ಮತ್ತು ಇತರೆ ಹಿಂದುಳಿದ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ

7. ಅ) (i) ವಿದ್ಯಾರ್ಥಿನಿಲಯದಲ್ಲಿ ಪ್ರವೇಶ (ii) ಊಟ ಮತ್ತು ವಸತಿ ಸಹಾಯ ಯೋಜನೆ (iii) ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಇವುಗಳಲ್ಲಿ ಒಬ್ಬ ವಿದ್ಯಾರ್ಥಿಯು ಯಾವುದಾದರೂ ಒಂದು ಸೌಲಭ್ಯಕ್ಕೆ ಮಾತ್ರ ಅರ್ಹರು. ಆದರೆ ಶುಲ್ಕವಿನಾಯಿತಿ ಸೌಲಭ್ಯವನ್ನು ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೂ ನೀಡಲಾಗುವುದು.

   ಆ) ವಿದ್ಯಾಸಿರಿ ಯೋಜನೆಯ ಸೌಲಭ್ಯವನ್ನು ಯಾವುದೇ ಇಲಾಖೆಯ ಸರ್ಕಾರಿ/ಸರ್ಕಾರಿ ಅನುದಾನಿತ ವಿದ್ಯಾರ್ಥಿ ನಿಲಯ/ ವಸತಿ ಕಾಲೇಜುಗಳಲ್ಲಿ ಪ್ರವೇಶ ದೊರೆಯದ ಹಾಗೂ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಈ ಸೌಲಭ್ಯವನ್ನು ಒದಗಿಸಲಾಗುವುದು

8. ಅ) ಸಮಾನ ಕೋರ್ಸುಗಳಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಅರ್ಹರಿರುವುದಿಲ್ಲ. (ಉದಾ: ಬಿ.ಎ. ನಂತರ ಬಿ.ಕಾಂ, ಎಂ.ಎ. (ಕನ್ನಡ) ನಂತರ ಎಂ.ಎ.(ಇಂಗ್ಲೀಷ್), ಬಿ.ಎಡ್ ನಂತರ ಎಲ್.ಎಲ್.ಬಿ. ಇತ್ಯಾದಿಗಳಿಗೆ ಪ್ರವೇಶ ಪಡೆದಿದ್ದಲ್ಲಿ )

   ಆ) ಸ್ನಾತಕೋತ್ತರ, ವೈದ್ಯಕೀಯ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು, ಕೋರ್ಸಿನ ಅವಧಿಯಲ್ಲಿ ಮೆಡಿಕಲ್ ಪ್ರಾಕ್ಟೀಸ್ ಮಾಡುತ್ತಿದ್ದಲ್ಲಿ, ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

   ಇ) ಕಲೆ, ವಿಜ್ಞಾನ ಹಾಗೂ ವಾಣಿಜ್ಯ ಕೋರ್ಸುಗಳ, ಪದವಿ ಅಥವಾ ಸ್ನಾತಕೋತ್ತರ ಪದವಿಗಳಲ್ಲಿ ಉತ್ತೀರ್ಣ/ ಅನುತ್ತೀರ್ಣರಾದವರು ಅಂಗೀಕೃತ ವೃತ್ತಿಪರ ಅಥವಾ ತಾಂತ್ರಿಕ ಸರ್ಟಿಫಿಕೇಟ್, ಡಿಪ್ಲೋಮಾ, ಪದವಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಹಾಗೂ ಇತರೆ ರೀತಿ ಅರ್ಹರಿದ್ದಲ್ಲಿ ಅವರು ಈ ಯೋಜನೆಯಡಿ ಸೌಲಭ್ಯಗಳಿಗೆ ಅರ್ಹರಿರುತ್ತಾರೆ. ಒಂದಕ್ಕಿಂತ ಹೆಚ್ಚು ಬಾರಿ ಕೋರ್ಸುಗಳ ಬದಲಾವಣೆ ಮಾಡಿಕೊಂಡವರು ಅರ್ಹರಿರುವುದಿಲ್ಲ.

   ಈ) ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.

9\. 1 ಹೊಸ ವಿದ್ಯಾರ್ಥಿಗಳು :- ಹೊಸದಾಗಿ ಅರ್ಜಿ ಸಲ್ಲಿಸುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ವಿದ್ಯಾಸಿರಿ – ಊಟ ಮತ್ತು ವಸತಿ ಸಹಾಯ ಯೋಜನೆ /ಶುಲ್ಕ ವಿನಾಯಿತಿ/ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಕಾರ್ಯಕ್ರಮಗಳ ಸೌಲಭ್ಯ ಪಡೆಯಲು ಒಂದೇ ಅರ್ಜಿ ಸಲ್ಲಿಸಬೇಕು.

2 ನವೀಕರಣ ವಿದ್ಯಾರ್ಥಿಗಳು:- ಈಗಾಗಲೇ 2020-21ನೇ ಸಾಲಿನಲ್ಲಿ ಸಲ್ಲಿಸಿರುವ ಅರ್ಜಿ ಸಂಖ್ಯೆಯನ್ನು ನಮೂದಿಸಿ 2021-22 ನೇ ಸಾಲಿಗೆ ನವೀಕರಣ ಅರ್ಜಿಯನ್ನು ಸಲ್ಲಿಸಬೇಕು.

3 ಮೇಲ್ಕಂಡ ಎಲ್ಲಾ ಸರ್ಕಾರಿ ಸವಲತ್ತುಗಳನ್ನು ಪಡೆಯಲು ಆಧಾರ್ ಸಂಖ್ಯೆಯ ಮಾಹಿತಿಗಳನ್ನು UIDAI ನಿಂದ ಪಡೆದುಕೊಳ್ಳಲು ವಿದ್ಯಾರ್ಥಿಗಳು ಆಧಾರ್-ಕನ್ಸೆಂಟ್ ನಮೂನೆಗೆ ದೃಢೀಕರಣವನ್ನು ಕಡ್ಡಾಯವಾಗಿ ಆನ್ ಲೈನ್ ನಲ್ಲಿ ನೀಡಬೇಕು.

5 ಪಡಿತರ ಚೀಟಿ ಇದ್ದಲ್ಲಿ ಅದರ ವಿವರ.

6 ಅಂಧ ವಿದ್ಯಾರ್ಥಿಗಳಾಗಿದ್ದಲ್ಲಿ "ಅಂಧತ್ವ ಪ್ರಮಾಣ ಪತ್ರ" ವನ್ನು (UDID)ಕಡ್ಡಾಯವಾಗಿ ಅಪ್ ಲೋಡ್ ಮಾಡಬೇಕು. ಇಂತಹ ವಿದ್ಯಾರ್ಥಿಗಳಿಗೆ ನಿಗದಿತ ಶುಲ್ಕಗಳ ಜೊತೆಗೆ ಜೊತೆಗೆ ಹೆಚ್ಚುವರಿಯಾಗಿ "ರೀಡರ್ ಚಾರ್ಜ್" (Reader Charge) ಅನ್ನು ಸಹ ಶುಲ್ಕವಿನಾಯಿತಿ ಯೋಜನೆಯಡಿ ಮಂಜೂರು ಮಾಡಲಾಗುವುದು.

7 ಅರ್ಜಿ ಸಲ್ಲಿಸುವಾಗ ಒಂದು ಕಾಲೇಜಿನಲ್ಲಿ ಪ್ರವೇಶ ಪಡೆದು ತದನಂತರ ಬೇರೊಂದು ಕಾಲೇಜು ಹಾಗೂ ಕೋರ್ಸನ್ನು ಬದಲಾವಣೆ ಮಾಡಿಕೊಳ್ಳುವ ವಿದ್ಯಾರ್ಥಿಗಳು ತಕ್ಷಣ ಆಯಾಯ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಅಥವಾ ಆಯುಕ್ತಾಲಯ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ Helpline ನಂಬರನ್ನು ಸಂಪರ್ಕಿಸಿ ಅಗತ್ಯ ಬದಲಾವಣೆಗಳನ್ನು ಮಂಜೂರಾತಿಗಿಂತ ಪೂರ್ವದಲ್ಲಿಯೇ ಮಾಡಿಕೊಳ್ಳಬೇಕು, ಇಂತಹ ಪ್ರಕರಣಗಳಿಗೆ ವಿದ್ಯಾರ್ಥಿಗಳೇ ಹೊಣೆಗಾರರಾಗಿರುತ್ತಾರೆ.

8 ವಿದ್ಯಾರ್ಥಿಗಳು ಕಡ್ಡಾಯವಾಗಿ ತಮ್ಮ ಬ್ಯಾಂಕ್ ಖಾತೆಗಳಿಗೆ ಆಧಾರ್ ಸಂಖ್ಯೆಯನ್ನು NPCI(National payment corporation of India) ಮ್ಯಾಪಿಂಗ್ ಮಾಡಿಸಬೇಕು. ತಪ್ಪಿದಲ್ಲಿ ಮಂಜೂರಾದ ಸೌಲಭ್ಯ ವಿದ್ಯಾರ್ಥಿಗಳ ಖಾತೆಗೆ ಜಮಾ ಆಗದಿದ್ದಲ್ಲಿ ಇಲಾಖೆ ಜವಾಬ್ದಾರಿಯಿಲ್ಲ. ಹಾಗೂ ನಿಮ್ಮ ಬ್ಯಾಂಕ್ ಖಾತೆಗಳನ್ನು ಚಾಲನೆಯಲ್ಲಿ ಇಟ್ಟುಕೊಳ್ಳುವುದು ಸಹ ವಿದ್ಯಾರ್ಥಿಗಳ ಜವಾಬ್ದಾರಿಯಾಗಿರುತ್ತದೆ.

ಹೆಚ್ಚಿನ ಹಾಗೂ ಈ ಕಾರ್ಯಕ್ರಮಗಳ ಸರ್ಕಾರದ ಆದೇಶಗಳಿಗಾಗಿ ವಿದ್ಯಾರ್ಥಿಗಳು ಸಂಬಂಧಿಸಿದ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು/ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳನ್ನು ಅಥವಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವೆಬ್ ಸೈಟ್ www.backwardclasses.kar.nic.in ಸಂಪರ್ಕಿಸಬಹುದು.